**ಕರ್ನಾಟಕ ಲೋಕಸೇವಾ ಆಯೋಗ**

ಸಂಖ್ಯೆ: ಪಿಎಸ್‌ಸಿ117ಇಪ(1)117/2020-21

ಲೋಕಸೇವಾ ಆಯೋಗದ ಕಛೇರಿ,
"ಉದ್ಯೋಗ ಸೌಧ",
ಬೆಂಗಳೂರು, ದಿನಾಂಕ: 14-07-2020.

**ಪತ್ರಿಕಾ ಪ್ರಕಟಣೆ**

ವಿಷಯ: ದಿನಾಂಕ: 17.07.2020 ರಿಂದ ಆರಂಭವಾಗಬೇಕಿದ್ದ 2020ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳನ್ನು ತಾತ್ಕಾಲಿಕವಾಗಿ ಮುಂದೂಡುವ ಬಗ್ಗೆ.

*****

ಆಯೋಗವು ದಿನಾಂಕ: 17.07.2020 ರಿಂದ 11.08.2020 ರವರೆಗೆ ನಡೆಸಲು ನಿರ್ಧರಿಸಲಾಗಿದ್ದ 2020ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳನ್ನು ರಾಜ್ಯ ಸರ್ಕಾರದ ದಿನಾಂಕ: 13.07.2020 ರ ಆದೇಶದಲ್ಲಿ ಕೋವಿಡ್-19 ಕಾರಣದಿಂದಾಗಿ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಲಾಕ್‌ಡೌನ್ ವಿಧಿಸಿದೆ. ಅಲ್ಲದೇ ರಾಜ್ಯದ ಹಲವು ಜಿಲ್ಲೆಗಳಲ್ಲಿಯೂ ಸಹ ಈ ಅವಧಿಯಲ್ಲಿ ಲಾಕ್‌ಡೌನ್ ವಿಧಿಸಲಾಗಿದೆ. ಸರ್ಕಾರದ ದಿನಾಂಕ: 09.07.2020 ರ ಆದೇಶದಲ್ಲಿ ಎಲ್ಲಾ ಇಲಾಖೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ 50 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗ್ರೂಪ್-ಎ, ಬಿ ಮತ್ತು ಸಿ ವೃಂದದ ಅಧಿಕಾರಿ/ಸಿಬ್ಬಂದಿಗಳನ್ನು ಕೋವಿಡ್-19 ಕಾರ್ಯ ನಿರ್ವಾಹಣೆಗೆ ನಿಯೋಜಿಸಿದೆ. ಅಲ್ಲದೇ ಕೆಲವು ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸರ್ಕಾರಿ ನೌಕರರುಗಳ ಆರೋಗ್ಯದ ಹಿತದೃಷ್ಟಿಯಿಂದ ಇಲಾಖಾ ಪರೀಕ್ಷೆಗಳನ್ನು ಮುಂದೂಡುವಂತೆ ಮನವಿ ಮಾಡಿಕೊಂಡಿರುತ್ತಾರೆ. ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಆಯೋಗವು ದಿನಾಂಕ: 17.07.2020 ರಿಂದ ಪ್ರಾರಂಭಿಸಬೇಕಿದ್ದ ಇಲಾಖಾ ಪರೀಕ್ಷೆಗಳನ್ನು ತಾತ್ಕಾಲಿಕವಾಗಿ ಮುಂದೂಡಿದೆ. ಮುಂದಿನ ಪರೀಕ್ಷಾ ದಿನಾಂಕಗಳನ್ನು ನಂತರದ ದಿನಗಳಲ್ಲಿ ಆಯೋಗದ ಅಂತರ್ಜಾಲ http://kpsc.kar.nic.in ರಲ್ಲಿ ಪ್ರಕಟಿಸಲಾಗುವುದು.

Sathyavathy 14.7.2020

(ಜಿ. ಸತ್ಯವತಿ)
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.